10) ಲಾಭ ಗಳಿಸಿದ ಆಸ್ತಿಗಳನ್ನು ನಬಾರ್ಡಿನ ಓ.ಟಿ.ಎಸ್. ಯೋಜನೆಯಡಿಯಲ್ಲಿ ಶೇಕಡಾ 160 ಬಡ್ಡಿ ದರದಲ್ಲಿ ವಸೂಲಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.

11) ಪುನ:ಶ್ಚೇತನ ಕೆಲಸಗಳನ್ನು ತ್ವರಿತಗೊಳಿಸಲು ಹಾಗೂ ಸೂಕ್ತ ಸಲಹೆ ನೀಡಲು ಸಲಹಾ ಸಮಿತಿಯನ್ನು ರಚಿಸಲಾಗಿದೆ.

12) ಎಲ್ಲಾ ಸುಸ್ತಿ ಸಾಲಗಳನ್ನು ವಸೂಲಿ ಮಾಡಿಕೊಳ್ಳಲು ಕಾನೂನು ರೀತ್ಯಾ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

13) ಬ್ಯಾಂಕಿನ ಪುನ:ಶ್ಚೇತನಕ್ಕಾಗಿ ಇಲಾಖಾ ಹಾಗೂ ಸರ್ಕಾರದ ಹಂತದಲ್ಲಿ ಸರ್ವ ರೀತಿಯ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

14) ದಾವಾ ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಸರ್ಕಾರ ಕಾಯ್ದೆ ಕಲಂ 69ರಡಿಯಲ್ಲಿನ ಅಧಿಕಾರವನ್ನು ಧಾರವಾಡ ಉಪನಿಬಂಧಕರಿಗೆ ಪ್ರತ್ಯಾಯೋಜಿಸಿದೆ.

15) 2003–04ನೇ ಸಾಲಿಗೆ ಬ್ಯಾಂಕು 90.50 ಕೋಟಿ ಬೆಳೆ ಸಾಲ ವಿತರಣೆ ಮಾಡಿರುತ್ತದೆ ಹಾಗು ಈ ತನಕ ಒಟ್ಟಾರೆ 51.15 ಕೋಟಿಗಳಷ್ಟು ಅರ್ಬನ್ ಬ್ಯಾಂಕುಗಳ; ಸದಸ್ಯರುಗಳ ಹಾಗೂ ಗ್ರಾಹಕರುಗಳ ಠೇವಣಿಯನ್ನು ವಾಪಸ್ಸು ಮಾಡಿದ್ದು ರೂ. 0.72 ಕೋಟಿ ಹೊಸ ಠೇವಣಿಯನ್ನು ಸಹ ಸಂಗ್ರಹಿಸಿರುತ್ತದೆ.

16) ಮುಂಗಾರು 2002ರ ಸಂಪೂರ್ಣ ಬಡ್ಡಿ ಮನ್ನಾ ಯೋಜನೆಯಡಿ ಬ್ಯಾಂಕಿಗೆ ಇದುವರೆಗೆ ರೂ. 3.18 ಕೋಟಿ ಹಣ ಬಿಡುಗೊಳಿಸಲಾಗಿದೆ.

630(203) ವಿ. ಸೋಮಣ್ಣ (ಬಿನ್ನಿಪೇಟೆ) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಎಷ್ಟು ಜನ ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಹಳದಿ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ;

ಆ) ಅರ್ಹರಲ್ಲದವರಿಗೂ ಈ ಪಡಿತರ ಚೀಟಿ ನೀಡಿರುವ ದೂರುಗಳು ಬಂದಿದೆಯೇ;

ಇ) ಹಲವಾರು ಬಡವರು ಈ ಹಳದಿ ಪಡಿತರ ಚೀಟಿಯಿಂದ ವಂಚಿತರಾಗಿರುವುದು ನಿಜವಲ್ಲವೇ;

ಈ) ಹಾಗಿದ್ದಲ್ಲಿ ಅನರ್ಹರನ್ನು ಪತ್ತೆ ಹಚ್ಚಿ ಎಲ್ಲಾ ಅರ್ಹ ಫಲಾನುಭವಿಗಳಿಗೆ ಈ ಪಡಿತರ ಚೀಟಿ / ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಎಸ್. ಮಹದೇವಪ್ರಸಾದ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಹಳದಿ ಎಎವೈ ಒಟ್ಟು
205134 14692 219726

ಒಟ್ಟು 2,19,726 ಕುಟುಂಬಗಳಿಗೆ ಹಳದಿ ಪಡಿತರ ಚೀಟಿ ನೀಡಲಾಗಿರುತ್ತದೆ.

ಆ) ಈ ಬಗ್ಗೆ ದೂರು ಬಂದಿದೆ. ಅನರ್ಹರನ್ನು ಪತ್ತೆ ಹಚ್ಚಿ, ಅಂತಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗುತ್ತಿದೆ.

ಇ) ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಘೋಷಿತ ಹಾಗೂ ಅಘೋಷಿತ ಕೊಳಚೆ ಪ್ರದೇಶಗಳಲ್ಲಿ ಸಮೀಕ್ಷೆ ನಡೆಸಿ ಅರ್ಹ ಬಡತನ ರೇಖೆಗಿಂದ ಕೆಳಗಿನ ಕುಟುಂಬಗಳಿಗೆ ಹಳದಿ ಪಡಿತರ ಚೀಟಿಗಳನ್ನು ನೀಡಲಾಗಿತ್ತು. ನಂತರ ಕೊಳಚೆ ಪ್ರದೇಶದ ಹೊರಗಿನ ಬಡತನ ರೇಖೆಗಿಂತ ಕೆಳಗಿನ ಅರ್ಹ ಕುಟುಂಬಗಳನ್ನು ಸಹ ಗುರುತಿಸಿ ಹಳದಿ ಪಡಿತರ ಚೀಟಿ ನೀಡಲಾಗಿರುತ್ತದೆ.

ಈ) ಮನೆ–ಮನೆ ಪುನರ್ ಸಮೀಕ್ಷೆ ಕಾರ್ಯವನ್ನು ಜನವರಿ 2005ರಿಂದ ಏಪ್ರಿಲ್ 2005ರವರೆಗೆ ಕೈಗೊಂಡಿದ್ದು, ಸಮೀಕ್ಷೆ ಮುಕ್ತಾಯವಾದ ನಂತರ ಎಲ್ಲಾ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ ವಿತರಿಸಲಾಗುವುದು.

631(1070) ಶ್ರೀ ವಿ. ಸೋಮಣ್ಣ (ಬಿನ್ನಿಪೇಟೆ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರಿನ ಲಾಲ್‌ಬಾಗ್ ಉದ್ಯಾನವನದ ಪಶ್ಚಿಮ ದ್ವಾರದ ಬಳಿ ಹಾಪ್‌ಕಾಮ್ಸ್ ಮಳಿಗೆ ಪ್ರಾರಂಭಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

632(1071) ಶ್ರೀ ಸೋಮಣ್ಣ ವಿ. (ಬಿನ್ನಿಪೇಟೆ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೋಲಾರದಲ್ಲಿ ತೋಟಗಾರಿಕೆ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದೆಯೇ;

ಆ) ಹಾಗಿದ್ದಲ್ಲಿ ಇದಕ್ಕಾಗಿ ಕೈಗೊಂಡ ಪೂರ್ವ ಸಿದ್ಧತೆ ಕಾರ್ಯಕ್ರಮಗಳೇನು;

ಇ) ಈ ಉದ್ದೇಶಿತ ವಿಶ್ವವಿದ್ಯಾಲಯದ ಕಾರ್ಯ ವ್ಯಾಪ್ತಿ ಏನು;

ಈ) ಇದರಿಂದ ಆಗತಕ್ಕ ಪ್ರಯೋಜನಗಳೇನು?